ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 15/4/2021

## ಬೆಂಗಳೂರಿನಲ್ಲಿ 10 ಹೊಸ ಕೋವಿಡ್ ಸೆಂಟರ್

13/4/21



ಬೆಳಗಾವಿ: ಬೆಂಗಳೂರಿನಲ್ಲಿ ಹತ್ತು ಹೊಸ ಕೋವಿಡ್ ಸೆಂಟರ್ ತೆರೆಯಲು ತೀರ್ಮಾನಿಸಿದ್ದೇವೆ. ಇದರಲ್ಲಿ 1500 ಬೆಡ್ ವ್ಯವಸ್ಥೆ ಮಾಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಪ್ರಕಟಿಸಿದರು. ಬೆಳಗಾವಿಯಲ್ಲಿ ಬಿರುಸಿನ ಚುನಾವಣಾ ಪ್ರಚಾರದ ನಡುವೆ ಸುದ್ದಿಗಾರರ ಜತೆ ಮಾತನಾಡಿದ ಮುಖ್ಯಮಂತ್ರಿಗಳು, ಕೊರೊನಾ ಸೋಂಕು ತಡೆಗೆ ಸಾರ್ವಜನಿಕರ ಸಹಕಾರ ಅಗತ್ಯ ಎಂದು ಹೇಳಿದರು. ಲೋಕಸಭೆ ಉಪಚುನಾವಣೆ ಪ್ರಚಾರದಲ್ಲಿ ಜಾರಕಿಹೊಳಿ ಬ್ರದರ್ಸ್ ಸಹಕಾರ ಕೊಡುತ್ತಿದ್ದಾರೆ. 4 ಲಕ್ಷಕ್ಕೂ ಹೆಚ್ಚು ಅಂತರದಿಂದ ಬಿಜೆಪಿ ಅಭ್ಯರ್ಥಿ ಗೆಲುವು ದಾಖಲಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು, ಕೊರೊನಾ ಟಫ್ ರೂಲ್ಸ್ ಬಗ್ಗೆ ಸರ್ವಪಕ್ಷ ಸಭೆಯ ಬಳಿಕವಷ್ಟೇ ತೀರ್ಮಾನಿಸುತ್ತೇವೆ. ಆ ಸಭೆಯಲ್ಲಿ ಎಚ್.ಡಿ ಕುಮಾರಸ್ವಾಮಿಗೆ ತಕ್ಕ ಉತ್ತರ ಕೊಡುವುದಾಗಿ ನುಡಿದರು.